ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE : 22/11/20

# ಕೇಂದ್ರದಿಂದ 21.02 ಕೋಟಿ ರೂ. ಬಿಡುಗಡೆ

## ಮತ್ಸ್ಯ ಸಂಪದ ಯೋಜನೆಯಡಿ 137.19 ಕೋಟಿ ರೂ. ಕ್ರಿಯಾಯೋಜನೆ: ಸಿಎಂ ಯಡಿಯೂರಪ್ಪ

ಬೆಂಗಳೂರು: ಕೇಂದ್ರ ಸರ್ಕಾರದ 'ಮತ್ಸ್ಯ ಸಂಪದ' ಯೋಜನೆಯಡಿ ರಾಜ್ಯದಲ್ಲಿ ಮೀನುಗಾರಿಕೆ ಅಭಿವೃದ್ಧಿಗೆ 137.19 ಕೋಟಿ ರೂ.ಗಳ ಕ್ರಿಯಾಯೋಜನೆಗೆ ಅನುಮೋದನೆ ದೊರೆತಿದೆ ಎಂದು ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಹೇಳಿದ್ದಾರೆ.

ವಿಧಾನಸೌಧದಲ್ಲಿ ಶನಿವಾರ ಆಯೋಜಿಸಿದ್ದ ವಿಶ್ವ ಮೀನುಗಾರಿಕೆ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಅವರು, ಕೇಂದ್ರದ ಪಾಲಿನ ಮೊದಲನೇ ಕಂತಿನ ಅನುದಾನ 21.02 ಕೋಟಿ ರೂ. ಬಿಡುಗಡೆಯಾಗಿದ್ದು ರಾಜ್ಯದ 23 ಜಿಲ್ಲೆಗಳ ಕ್ರಿಯಾಯೋಜನೆಗಳು ಈಗ ಅನುಷ್ಠಾನದ ಹಂತದಲ್ಲಿವೆ ಎಂದು ತಿಳಿಸಿದರು.

ರಾಜ್ಯದಲ್ಲಿ ಅಲಂಕಾರಿಕ ಮೀನು ಉತ್ಪಾದನೆ ಹಾಗೂ ಮಾರಾಟ ಚಟುವಟಿಕೆಯು ಇತ್ತೀಚಿನ ದಿನಗಳಲ್ಲಿ ಹೆಚ್ಚಾಗುತ್ತಿದೆ. ಈ ಕ್ಷೇತ್ರದಲ್ಲಿ ವ್ಯಾವಹಾರಿಕ ಶಿಸ್ತು ಹಾಗೂ ರಫ್ತು ವಹಿವಾಟು ಉತ್ತೇಜಿಸುವ ಉದ್ದೇಶದಿಂದ ಶೀಘ್ರದಲ್ಲಿಯೇ ಬೆಂಗಳೂರು ಸಮೀಪದ ಹೆಸರುಘಟ್ಟ ಮೀನುಮರಿ ಉತ್ಪಾದನಾ ಕೇಂದ್ರದಲ್ಲಿ ಸುಸಜ್ಜಿತ ಕ್ವಾರಂಟೈನ್ ಘಟಕ ಪ್ರಾರಂಭಿಸಲಾಗುವುದು ಎಂದು ಹೇಳಿದರು.



ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರು ವಿಧಾನಸೌಧದಲ್ಲಿ ಶನಿವಾರ ಆಯೋಜಿಸಿದ್ದ ವಿಶ್ವ ಮೀನುಗಾರಿಕೆ ದಿನಾಚರಣೆ ಕಾರ್ಯಕ್ರಮ ಉದ್ಘಾಟಿಸಿದರು.

ಅತ್ಯಾಧುನಿಕ ತಂತ್ರಜ್ಞಾನ ಅಳವಡಿಕೆಯ ಮೂಲಕ ಮೀನುಗಾರರ ಸುರಕ್ಷತೆ ಹಾಗೂ ಮೀನುಗಾರಿಕೆಯಲ್ಲಿ ಆದಾಯ ಹೆಚ್ಚಳ ಮಾಡುವುದು ನಮ್ಮ ಸರ್ಕಾರದ ಗುರಿಯಾಗಿದೆ ಎಂದು ತಿಳಿಸಿದರು.

### ಮನೆ ಬಾಗಿಲಿಗೆ ಮೀನು ಪೂರೈಕೆಗೆ ಚಾಲನೆ

ಇದೇ ಸಂದರ್ಭದಲ್ಲಿ ಆನ್‌ಲೈನ್ ಮೂಲಕ ಆರ್ಡರ್ ಸಲ್ಲಿಸಿದರೆ ತಾಜಾ ಮೀನು ಮನೆ ಬಾಗಿಲಿಗೆ ತಲುಪಿಸುವ ಯೋಜನೆಗೆ ಚಾಲನೆ ನೀಡಲಾಯಿತು. ಬೆಂಗಳೂರಿನಲ್ಲಿ ಮೊದಲ ಹಂತದಲ್ಲಿ ಇದು ಜಾರಿಯಾಗಲಿದ್ದು ನಂತರ ರಾಜ್ಯಾದ್ಯಂತ ವಿಸ್ತರಣೆಯಾಗಲಿದೆ. ಒಂದೆರಡು ದಿನಗಳ ನಂತರ ಅಧಿಕೃತವಾಗಿ ಸೇವೆ ಪ್ರಾರಂಭಗೊಳ್ಳಲಿದೆ ಎಂದು ಇಲಾಖೆ ಅಧಿಕಾರಿಗಳು ತಿಳಿಸಿದರು.

ಕಾರ್ಯಕ್ರಮದಲ್ಲಿ ಮತ್ಸ್ಯಸಿರಿ ಖಾದ್ಯಗಳ ಬಿಡುಗಡೆ ಮಾಡಲಾಯಿತು.

2020-21ನೇ ಸಾಲಿನ ಆಯವ್ಯಯದಲ್ಲಿ ಮೀನುಗಾರಿಕೆ ಅಭಿವೃದ್ಧಿಗೆ 251.57 ಕೋಟಿ ರೂ.ಗಳನ್ನು ಒದಗಿಸಿ ಈ ಪೈಕಿ ಕೇಂದ್ರ ಪುರಸ್ಕೃತ ಯೋಜನೆಗಾಗಿ 200 ಕೋಟಿ ರೂ. ವೆಚ್ಚದಲ್ಲಿ ಮೂಲ ಸೌಕರ್ಯಗಳನ್ನು ಅಭಿವೃದ್ಧಿಪಡಿಸಲು ಅವಕಾಶ ಕಲ್ಪಿಸಿದೆ ಎಂದು ಹೇಳಿದರು.

ಮೀನುಗಾರಿಕೆ ಸಚಿವ ಕೋಟ ಶ್ರೀನಿವಾಸ ಪೂಜಾರಿ ಮಾತನಾಡಿ, ಮತ್ಸ್ಯ ಸಂಪದ ಯೋಜನೆಯು ಐದು ವರ್ಷಗಳ ಅವಧಿಯಾಗಿದ್ದು, ಮೀನುಗಾರರನ್ನು ಬಡತನ ರೇಖೆಗಿಂತ ಮೇಲೆ ತರಲು ಹಲವು ಯೋಜನೆಗಳನ್ನು ರೂಪಿಸಲಾಗಿದೆ ಎಂದು ತಿಳಿಸಿದರು.

ಇದೇ ಸಂದರ್ಭದಲ್ಲಿ ದೋಣಿ ಅವಘಡದಲ್ಲಿ ಮೃತರಾದ ಏಳು ಜನರ ಅವಲಂಬಿತರಿಗೆ 10 ಲಕ್ಷ ರೂ. ಹೆಚ್ಚುವರಿ ಪರಿಹಾರ ವಿತರಿಸಲಾಯಿತು. ಮೀನುಗಾರಿಕೆ ಕ್ಷೇತ್ರದ ಸಾಧಕರನ್ನು ಸನ್ಮಾನಿಸಲಾಯಿತು.

ಕಂದಾಯ ಸಚಿವ ಆರ್.ಅಶೋಕ್, ಉಡುಪಿ ಶಾಸಕ ರಘುಪತಿ ಭಟ್, ಮಾಜಿ ಸಚಿವ ಕುಮಾರ ಬಂಗಾರಪ್ಪ ಮತ್ತಿತರರು ಉಪಸ್ಥಿತರಿದ್ದರು.